ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದ ಸರ್ಕಾರಿ ಆಸ್ಪತ್ರೆಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) -

01 (28) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಇತರೆ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಕೊರೋನಾ 19 ಸಾಂಕ್ರಾಮಿಕ ರೋಗ ಎಂದು ಪರಿಗಣಿಸಿದ ದಿನಾಂಕದಿಂದ ಇಲ್ಲಿಯತನಕ ಈ ಆಸ್ಪತ್ರೆಗಳ ಮೂಲಭೂತ ಅವಶ್ಯಕತೆಗಾಗಿ ಮಂಜೂರು ಮಾಡಿದ ಅನುದಾನವೆಷ್ಟು; ಬಿಡುಗಡೆಮಾಡಲಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನ ಎಷ್ಟು; (ಜಿಲ್ಲಾವಾರು ಮತ್ತು ಸಂಸ್ಥೆಯವಾರು ವಿವರವನ್ನು ನೀಡುವುದು)

(ಆ) ರಾಜ್ಯದಲ್ಲಿ ಕೋವಿಡ್ 19 ವೈರಸ್ ಪತ್ತೆ ಮಾಡುತ್ತಿರುವ ಖಾಸಗಿ ಮತ್ತು ಸರ್ಕಾರಿ ಪ್ರಯೋಗಾಲಯಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; ಈ ಪರೀಕ್ಷಾ ಕೇಂದ್ರದಲ್ಲಿ ನಡೆಸಲಾದ RTPCR ಮತ್ತು RAPID ANTIGEN TEST ಪರೀಕ್ಷೆಗಳ ಸಂಖ್ಯೆ ಎಷ್ಟು; (ಖಾಸಗಿ ಮತ್ತು ಸರ್ಕಾರಿ ಪ್ರಯೋಗಾಲಯದ ಪರೀಕ್ಷೆವಾರು, ತಿಂಗಳುವಾರು ಮಾಹಿತಿಯನ್ನು ಒದಗಿಸುವುದು)

(ಇ) ಈ ಸಂಬಂಧ ಖಾಸಗಿ ಪ್ರಯೋಗಾಲಯಗಳಿಗೆ ಪಾವತಿಸಿದ ಮೊತ್ತವೆಷ್ಟು; ಬಿಡುಗಡೆಗೆ ಬಾಕಿಯಿರುವ ಮೊತ್ತವೆಷ್ಟು; (ಖಾಸಗಿ ಪ್ರಯೋಗಾಲಯದ ಪರೀಕ್ಷಾವಾರು, ತಿಂಗಳವಾರು ಮಾಹಿತಿಯನ್ನು ಒದಗಿಸುವುದು)

(ಈ) ರಾಜ್ಯದಲ್ಲಿ ಸ್ಥಾಪಿಸಲಾದ ಕೋವಿಡ್ ಕೇರ್ ಕೇಂದ್ರಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಆರೈಕೆ ಪಡೆದ ರೋಗಿಗಳ ಸಂಖ್ಯೆ ಎಷ್ಟು; ಅವುಗಳ ನಿರ್ವಹಣೆಗೆ ಮತ್ತು ರೋಗಿಗಳ ಆರೈಕೆಗೆ ಮಂಜೂರು ಮಾಡಿದ ಅನುದಾನವೆಷ್ಟು; ಬಿಡುಗಡೆ ಮಾಡಲಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಅನುದಾನವೆಷ್ಟು ಬಿಡುಗಡೆಗೆ ಬಾಕಿಯಿರುವ ಅನುದಾನ ಎಷ್ಟು? (ಜಿಲ್ಲಾವಾರು, ಕೇಂದ್ರವಾರು, ತಿಂಗಳವಾರು, ಮಾಹಿತಿಯನ್ನು ಒದಗಿಸುವುದು)